ಶ್ರೀ ಕೆ.ಬಿ. ಕೋಳಿವಾಡ್ (ಗ್ರಾಮೀಣ ನೀರು ಸರಬರಾಜು ರಾಜ್ಯ ಸಚಿವರು):

ಅ) ಮುಖ್ಯ ಇಂಜಿನಿಯರ್, ಗ್ರಾಮೀಣಾಭಿವೃದ್ಧಿ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಸಂಗ್ರಾಆಇಂಇ / ಎಇಡಿ / ಚಿಂತಾಮಣಿ / ಡ್ಯಾನಿಡಾ / 2000–01 / 632, ದಿನಾಂಕ 5.5.2000ದಲ್ಲಿ ಚಿಂತಾಮಣಿ ತಾಲ್ಲೂಕಿನಲ್ಲಿ ಡ್ಯಾನಿಡಾ ಯೋಜನೆಯನ್ನು ವಿಸ್ತರಿಸುವ ಬಗ್ಗೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲಾಗಿರುತ್ತದೆ. ಆದರೆ ಯೋಜನಾ ಒಪ್ಪಂದದ ಪ್ರಕಾರ ಚಿಂತಾಮಣಿ ತಾಲ್ಲೂಕು ಡ್ಯಾನಿಡಾ 2ನೇ ಹಂತದ ಯೋಜನೆಯಡಿಯಲ್ಲಿ ಸೇರ್ಪಡೆಯಾಗಿರುವುದಿಲ್ಲ.

ಆ) ಮೇಲೆ ನೀಡಿರುವ ಉತ್ತರವು ಈ ಪ್ರಶ್ನೆಗೂ ಅನ್ವಯಿಸುತ್ತದೆ.

ಇ) ಡ್ಯಾನಿಡಾ ನೆರವಿನ ಯೋಜನೆಯ 2ನೇ ಹಂತದಲ್ಲಿ ಕೋಲಾರ ಜಿಲ್ಲೆಯ ಬಂಗಾರಪೇಟೆ, ಮುಳಬಾಗಿಲು ಮತ್ತು ಗುಡಿಬಂಡೆ ತಾಲ್ಲೂಕುಗಳು ಮಾತ್ರ ಸೇರಿರುತ್ತವೆ.

ಚಿಂತಾಮಣಿ ತಾಲ್ಲೂಕಿನಲ್ಲಿ ಆಶ್ರಯ ಮತ್ತು ಅಂಬೇಡ್ಕರ್ ಮನೆಗಳ ನಿರ್ಮಾಣ

4067 (4540) : ಶ್ರೀ ಚೌಡರೆಡ್ಡಿ (ಚಿಂತಾಮಣಿ) : ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕಳೆದ 3 ವರ್ಷಗಳಲ್ಲಿ ಆಶ್ರಯ ಮತ್ತು ಅಂಬೇಡ್ಕರ್ ಯೋಜನೆಯಲ್ಲಿ ಚಿಂತಾಮಣಿ ತಾಲ್ಲೂಕಿನಲ್ಲಿ ಎಷ್ಟು ಮನೆಗಳು ನಿರ್ಮಾಣವಾಗಿವೆ;

ಆ) ಎಷ್ಟು ಮನೆಗಳ ನಿರ್ಮಾಣಕ್ಕೆ ಎಷ್ಟು ಹಣದ ನೆರವು ನೀಡಲಾಗಿದೆ;

ಇ) ಹಣ ಬಿಡುಗಡೆಯಾಗಿದ್ದರೆ, ಫಲಾನುಭವಿಗಳಿಗೆ ಇದುವರೆವಿಗೂ ಹಣಕಾಸು ನೆರವು ನೀಡದೆ ಇರುವುದಕ್ಕೆ ಕಾರಣಗಳೇನು;

ಈ) ಕೂಡಲೇ ಫಲಾನುಭವಿಗಳಿಗೆ ಹಣ ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಸಿ.ಆರ್. ಸಗೀರ್ ಅಹಮದ್ (ವಸತಿ ಸಚಿವರು):

ಅ) 2000–01 ರಿಂದ 2002–03ರವರೆಗೆ 3092 ಮನೆಗಳನ್ನು ನಿರ್ಮಾಣ ಮಾಡಲಾಗಿದೆ.

ಆ) 3092 ಮನೆಗಳ ನಿರ್ಮಾಣಕ್ಕೆ ರೂ. 781.28 ಲಕ್ಷಗಳ ನೆರವು ನೀಡಲಾಗಿದೆ.

ಇ) ಮನೆಗಳ ಪ್ರಗತಿಯನ್ನು ದಾಖಲಿಸಿ, ಪ್ರಗತಿಗೆ ತಕ್ಕಂತೆ ಫಲಾನುಭವಿಗಳಿಗೆ ಹಣವನ್ನು ಬಿಡುಗಡೆ ಮಾಡಲಾಗುತ್ತಿದೆ.

ಈ) ಈಗಾಗಲೇ ಕ್ರಮ ಕೈಗೊಳ್ಳಲಾಗಿದೆ.

ಚಿಂತಾಮಣಿ ತಾಲ್ಲೂಕಿನಲ್ಲಿ ಆಶ್ರಯ ಯೋಜನೆಯಲ್ಲಿ ಮನೆಗಳ ಹಂಚಿಕೆ

4068 (4541) : ಶ್ರೀ ಚೌಡರೆಡ್ಡಿ (ಚಿಂತಾಮಣಿ) : ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಚಿಂತಾಮಣಿ ತಾಲ್ಲೂಕು ಮುರಗಮಲ್ಲಾ ಗ್ರಾಮ ಪಂಚಾಯತಿಗೆ ಹೆಚ್ಚುವರಿಯಾಗಿ 200 ಮನೆಗಳು ಆಶ್ರಯ ಯೋಜನೆಯಲ್ಲಿ ಬಿಡುಗಡೆಯಾಗಿದ್ದು ಬಿಡುಗಡೆಯಾಗಿರುವ ಮನೆಗಳ ಫಲಾನುಭವಿಗಳನ್ನು ಆಯ್ಕೆ ಮಾಡಲು ಏನು ಕ್ರಮ ತೆಗೆದುಕೊಳ್ಳಲಾಗಿದೆ;

ಆ) ಆಶ್ರಯ ಸಮಿತಿ, ಯೋಜನೆಗೆ ಫಲಾನುಭವಿಗಳನ್ನು ಆಯ್ಕೆ ಮಾಡಬೇಕಾಗಿರುವುದನ್ನು ಸರ್ಕಾರ ಸುತ್ತೋಲೆಯಲ್ಲಿ ತಿಳಿಸಿದ್ದರೂ ಸಹ ಈವರೆವಿಗೂ ಆಯ್ಕೆಯಾಗಿರುವ ಬಗ್ಗೆ ಸಮಿತಿಯ ಗಮನಕ್ಕೆ ತರದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಫಲಾನುಭವಿಗಳಿಗೆ ಇದರಿಂದ ತೊಂದರೆಯಾಗಿದ್ದು, ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳುವುದು?

ಶ್ರೀ ಸಿ.ಆರ್. ಸಗೀರ್ ಅಹಮದ್ (ವಸತಿ ಸಚಿವರು):

ಅ) ಫಲಾನುಭವಿಗಳ ಆಯ್ಕೆ ಪ್ರಕ್ರಿಯೆ ಆಗಸ್ಟ್ 2002 ರೊಳಗಾಗಿ ಪೂರ್ಣವಾಗದ ಕಾರಣ ಮುರಗಮಲ್ಲ ಗ್ರಾಮ ಪಂಚಾಯತಿಯ ವಿಶೇಷ ಸಭೆಯನ್ನು ದಿನಾಂಕ 16.4.2003 ರಂದು ನಡೆಸಿ ಈ ಬಗ್ಗೆ ಫಲಾನುಭವಿಗಳ ಪಟ್ಟಿಯನ್ನು ತಯಾರಿಸಲು ನಿರ್ಣಯ ತೆಗೆದುಕೊಳ್ಳಲಾಗಿದೆ. ಅದರ ಆಧಾರದ ಮೇಲೆ ಫಲಾನುಭವಿಗಳ ಪಟ್ಟಿಯನ್ನು ಜಿಲ್ಲಾ ಪಂಚಾಯತಿಗೆ ಅನುಮೋದನೆಗಾಗಿ ಹಾಗೂ ಹಣ ಬಿಡುಗಡೆಗಾಗಿ ಕಳುಹಿಸಲಾಗಿದೆ.

ಆ) ಬಂದಿದೆ.

ಇ) ಅರ್ಹರಾಗಿ ಕಂಡು ಬಂದಿರುವ ಫಲಾನುಭವಿಗಳಿಗೆ ಅನಾನುಕೂಲವಾಗುವುದನ್ನು ತಪ್ಪಿಸಲು ಕೂಡಲೆ ಕ್ರಮ ಕೈಗೊಳ್ಳಲಾಗಿದ್ದು ಈಗಾಗಲೇ ಮಂಜೂರಾತಿ ನೀಡಿರುವಂತೆ, ಕೇವಲ 79 ಅರ್ಹ ಫಲಾನುಭವಿಗಳಿಗೆ ಸಂಬಂಧಿಸಿದಂತೆ ಮಾತ್ರ ದಾಖಲೀಕರಣ ಕಾರ್ಯ ಪ್ರಗತಿಯಲ್ಲಿರುತ್ತದೆ ಹಾಗೂ ಶೀಘ್ರದಲ್ಲಿಯೇ ದಾಖಲೀಕರಣ ಮುಗಿದ ಕೂಡಲೇ ಫಲಾನುಭವಿಗಳಿಗೆ ಮನೆಗಳ ನಿರ್ಮಾಣ ಕಾರ್ಯವನ್ನು ಪ್ರಾರಂಭಿಸಲು ನಿಯಮಾನುಸಾರ ಕ್ರಮ ಕೈಗೊಂಡು ಹಣ ಬಿಡುಗಡೆ ಮಾಡಲಾಗುವುದು.

ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ದ್ವಿತೀಯ ದರ್ಜೆ ಸಹಾಯಕರಿಗೆ ಬಡ್ತಿ

4069 (4547) : ಶ್ರೀ ದಿನೇಶ್ ಗುಂಡೂರಾವ್ (ಗಾಂಧಿನಗರ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ದ್ವಿತೀಯ ದರ್ಜೆ ಸಹಾಯಕ ವೃಂದದಿಂದ ಪ್ರಥಮ ದರ್ಜೆ ಸಹಾಯಕ ವೃಂದಕ್ಕೆ ಬಡ್ತಿ ನೀಡುವಲ್ಲಿ ವಿಳಂಬವಾಗುತ್ತಿರುವುದು ನಿಜವೇ; ಹಾಗಿದ್ದಲ್ಲಿ, ಈ ಪ್ರಸ್ತಾವನೆಯು ಎಷ್ಟು ವರ್ಷದಿಂದ ಬಾಕಿ ಇರುತ್ತದೆ;

ಆ) ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಬಡ್ತಿ ಮೂಲಕ ಭರ್ತಿ ಮಾಡದೇ ಖಾಲಿ ಇರಿಸಿ ಹೊಸ ಪ್ರೌಢ ಶಾಲೆಗಳಿಗೆ ಹುದ್ದೆ ಮಂಜೂರು ಮಾಡದೆ ಇಲಾಖೆಯ ದೈನಂದಿನ ಕೆಲಸ ಕಾರ್ಯಗಳಿಗೆ ಅಡಚಣೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಸಚಿವಾಲಯದಲ್ಲಿ ನೇರ ನೇಮಕಾತಿ ಹುದ್ದೆಗಳನ್ನು 1999ರಲ್ಲಿಯೇ ಫ್ರೀಜ್ ಮಾಡಿ ಬಡ್ತಿ ನೀಡಿರುವಾಗ ಅದೇ ಮಾನದಂಡವನ್ನು ಶಿಕ್ಷಣ ಇಲಾಖೆಗೂ ಅನ್ವಯಿಸಿ ಬಡ್ತಿ ನೀಡಲು ಸರ್ಕಾರಕ್ಕಿರುವ ತೊಂದರೆ ಏನು;

ಈ) ಸಚಿವಾಲಯದ ಕ್ರಮವನ್ನು ಅನುಸರಿಸಿ ಸುಮಾರು ವರ್ಷಗಳಿಂದ ಬಡ್ತಿಯಿಲ್ಲದೆ ಕಾಯುತ್ತಿರುವ ಈ ನೌಕರರ ಬಾಕಿಯಿರುವ ಪ್ರಕರಣವನ್ನು ಸರ್ಕಾರ ಎಷ್ಟು ದಿನಗಳಲ್ಲಿ ಇತ್ಯರ್ಥಪಡಿಸುವುದು?

ಪ್ರೊ. ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು):

ಅ) ಹೌದು

ದಿನಾಂಕ 22.10.2001ರಿಂದ ಬಾಕಿ ಇದೆ.